# ಕರ್ನಾಟಕ ವಿಧಾನ ಪರಿಷತ್ತು

**ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** : 1339
**ಸದಸ್ಯರ ಹೆಸರು** : ಶ್ರೀ ಸಿ.ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು)
**ಉತ್ತರಿಸುವವರು** : ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು.
**ಉತ್ತರಿಸಬೇಕಾದ ದಿನಾಂಕ** : 22.08.2025

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದ ಅಂಗನವಾಡಿ ಕೇಂದ್ರಗಳಿಗೆ ಆಹಾರ ಸಾಮಾಗ್ರಿಗಳ ಪೂರೈಕೆ ಮಾಡುವ ವಿಚಾರಕ್ಕೆ ಸಂಬಂಧಪಟ್ಟಂತೆ ರಾಜ್ಯ ಉಚ್ಚ ನ್ಯಾಯಾಲಯ ನೀಡಿರುವ ಸೂಚನೆ ಏನು; ನ್ಯಾಯಾಲಯದ ಸೂಚನೆಯನ್ನು ಯಾವ ರೀತಿ ಪಾಲಿಸಲಾಗಿದೆ; | ಘನ ಉಚ್ಚ ನ್ಯಾಯಾಲಯವು ರಿಟ್ ಅರ್ಜಿ ಸಂಖ್ಯೆ: 3522/2022ರ ಆದೇಶದಲ್ಲಿ ಸರ್ಕಾರದ ದಿನಾಂಕ:05-05-2021 ರ ಆದೇಶ ಮತ್ತು ದಿನಾಂಕ:02-07-2020 ರ ಸುತ್ತೋಲೆಯಲ್ಲಿ ತಿಳಿಸಿರುವ ಅಂಶಗಳನ್ನು ಅನುಷ್ಠಾನಗೊಳಿಸುವಂತೆ ಸೂಚನೆ ನೀಡಿರುತ್ತದೆ.<br><br>ಸದರಿ ಆದೇಶದ ಪಾಲನೆಗಾಗಿ ಬ್ಯೂರೋ ಆಫ್ ಇಂಡಿಯನ್ ಸ್ಟ್ಯಾಂಡರ್ಡ್ಸ್ (BIS) ಪರವಾನಗಿ ಹೊಂದಿರುವ ಅರ್ಹ ಮಹಿಳಾ ಗುಂಪುಗಳೊಂದಿಗೆ ಪೂರಕ ಪೌಷ್ಟಿಕ ಆಹಾರದ ಗುಣಮಟ್ಟವನ್ನು ಹೆಚ್ಚಿಸುವ ಸಲುವಾಗಿ ಸರ್ಕಾರಕ್ಕೆ ಯಾವುದೇ ಹೆಚ್ಚಿನ ಆರ್ಥಿಕ ಹೊರೆಯಿಲ್ಲದೆ ತಾಂತ್ರಿಕ ನೆರವು ಪಡೆಯಲು ಎಂ.ಎಸ್.ಪಿ.ಸಿ. ಗಳು ತಮ್ಮ ಹಂತದಲ್ಲಿ ಕರಾರು ಒಪ್ಪಂದವನ್ನು ಮಾಡಿಕೊಂಡಿರುತ್ತವೆ. |
| ಆ) | ನ್ಯಾಯಾಲಯದ ಸೂಚನೆಯಂತೆ ತಾಂತ್ರಿಕ ಸಲಹೆ ನೀಡಲು ಯಾವ ಸ್ವ-ಸಹಾಯ ಗುಂಪುಗಳನ್ನು ನೇಮಕ ಮಾಡಲಾಗಿದೆಯೇ; ಈ ಸ್ವ ಸಹಾಯ ಗುಂಪುಗಳನ್ನು ನೇಮಕ ಮಾಡುವಾಗ ಅನುಸರಿಸಿದ ಮಾನದಂಡವೇನು; ಸ್ವಸಹಾಯ ಗುಂಪುಗಳ ನೇಮಕಕ್ಕೆ ಟೆಂಡರ್ ಕರೆಯಲಾಗಿತ್ತೇ; ಈ ಸ್ವ ಸಹಾಯ ಗುಂಪುಗಳು ಯಾವ ಸಂಸ್ಥೆಯ ಅಡಿ ಕಾರ್ಯ ನಿರ್ವಹಿಸುತ್ತಿವೆ; | ಘನ ಉಚ್ಚ ನ್ಯಾಯಾಲಯವು ದಿನಾಂಕ:27-10-2022ರ ಆದೇಶದಲ್ಲಿ ಸರ್ಕಾರದ ದಿನಾಂಕ:05-05-2021ರ ಆದೇಶ ಮತ್ತು ದಿನಾಂಕ:02-07-2020ರ ಸುತ್ತೋಲೆಯಲ್ಲಿ ತಿಳಿಸಿರುವ ಅಂಶಗಳನ್ನು ಅನುಷ್ಠಾನಗೊಳಿಸುವಂತೆ ಆದೇಶಿಸಿರುತ್ತದೆ.<br><br>ಸದರಿ ಆದೇಶ ಹಾಗೂ ಸುತ್ತೋಲೆಗಳಲ್ಲಿ ಪೂರಕ ಪೌಷ್ಟಿಕ ಆಹಾರದ ಗುಣಮಟ್ಟ ಖಾತ್ರಿಪಡಿಸಲು ಎಲ್ಲಾ ಎಂ.ಎಸ್.ಪಿ.ಸಿಗಳು ಬ್ಯೂರೋ ಆಫ್ ಇಂಡಿಯನ್ ಸ್ಟ್ಯಾಂಡರ್ಡ್ಸ್ (BIS) ನಲ್ಲಿ ನೋಂದಾಯಿತವಾದ ಸ್ವ-ಸಹಾಯ ಗುಂಪುಗಳ ತಾಂತ್ರಿಕ ನೆರವು ಪಡೆಯಬೇಕೆಂದು ಸೂಚಿಸಿರುತ್ತದೆ. ಅದರನ್ವಯ ಪೂರಕ ಪೌಷ್ಟಿಕ ಆಹಾರದ ಗುಣಮಟ್ಟವನ್ನು ಹೆಚ್ಚಿಸುವ ಸಲುವಾಗಿ ಹಾಗೂ ತಾಂತ್ರಿಕ ನೆರವು ಪಡೆಯಲು ಸಂಘ ಸಂಸ್ಥೆಗಳ ನೋಂದಣಿ ಕಾಯಿದೆ 1960ರಡಿ ನೋಂದಾಣಿಯಾದ ಎಂ.ಎಸ್.ಪಿ.ಸಿ.ಗಳು ಬಿ.ಐ.ಎಸ್. ನಲ್ಲಿ ನೋಂದಾಯಿತ 3 ಮಹಿಳಾ ಗುಂಪುಗಳೊಂದಿಗೆ ಒಪ್ಪಂದ ಮಾಡಿಕೊಂಡಿರುತ್ತವೆ. ಇದರಿಂದಾಗಿ ಸರ್ಕಾರಕ್ಕೆ ಯಾವುದೇ ಹೆಚ್ಚಿನ ಆರ್ಥಿಕ ಹೊರೆ ಇರುವುದಿಲ್ಲ. ಇಲಾಖೆಯು ಬಿ.ಐ.ಎಸ್. ನಲ್ಲಿ ನೋಂದಾಯಿತ 3 ಮಹಿಳಾ ಗುಂಪುಗಳೊಂದಿಗೆ ಯಾವುದೇ ಒಪ್ಪಂದವನ್ನು ಮಾಡಿಕೊಂಡಿರುವುದಿಲ್ಲ. |
| ಇ) | ಅಂಗನವಾಡಿ ಕೇಂದ್ರಗಳಿಗೆ ಆಹಾರ ಸಾಮಾಗ್ರಿಗಳನ್ನು ಪೂರೈಸಲು ಟೆಂಡರ್ ಕರೆಯಲಾಗಿದೆಯೇ; ಟೆಂಡರ್‌ನಲ್ಲಿ ಭಾಗವಹಿಸಿದ್ದ ಸಂಸ್ಥೆಗಳು ಯಾವುವು; ಅವರು ನಮೂದಿಸಿದ್ದ ಟೆಂಡರ್ ಮೊತ್ತ ಎಷ್ಟು; | ಘನ ಸರ್ವೋಚ್ಚ ನ್ಯಾಯಾಲಯದ ಆದೇಶದಂತೆ 2008 ರಿಂದ ಇಲ್ಲಿಯವರೆಗೂ ಸರ್ಕಾರದ ವತಿಯಿಂದ ಸ್ಥಾಪಿಸಲಾದ ಎಂ.ಎಸ್.ಪಿ.ಸಿ.ಗಳು ಆಹಾರ ಪದಾರ್ಥಗಳನ್ನು ಸ್ಥಳೀಯವಾಗಿ ಖರೀದಿಸಿ ಮತ್ತು ಸಂಸ್ಕರಿಸಿ ಅಂಗನವಾಡಿ ಕೇಂದ್ರಗಳಿಗೆ ನೇರವಾಗಿ ಪೂರೈಸುತ್ತಿವೆ. ಈ ಹಿನ್ನೆಲೆಯಲ್ಲಿ ಟೆಂಡರ್ ಕರೆಯಲಾಗುತ್ತಿರುವುದಿಲ್ಲ. |

| | | |
|---|---|---|
| ಈ) | ಅಂಗನವಾಡಿ ಕೇಂದ್ರಗಳಿಗೆ ಆಹಾರ ಸಾಮಾಗ್ರಿಗಳನ್ನು ಯಾವ ಸಂಸ್ಥೆ ಪೂರೈಕೆ ಮಾಡುತ್ತಿದೆ; ಈ ಸಂಸ್ಥೆ ಜೊತೆ ಮಾಡಿಕೊಂಡಿರುವ ಗುತ್ತಿಗೆ/ಒಡಂಬಡಿಕೆ ಏನು; ಹಲವು ಜಿಲ್ಲೆಗಳಲ್ಲಿ ಕಳಪೆ ಆಹಾರ ಸಾಮಾಗ್ರಿ ಪೂರೈಕೆ ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಎಷ್ಟು ಪ್ರಕರಣಗಳು ವರದಿಯಾಗಿವೆ; (ಜಿಲ್ಲಾವಾರು ವಿವರ ನೀಡುವುದು) | ಘನ ಸರ್ವೋಚ್ಚ ನ್ಯಾಯಾಲಯದ ಆದೇಶದಂತೆ 2008 ರಿಂದ ಇಲ್ಲಿಯವರೆಗೂ ಸರ್ಕಾರದ ವತಿಯಿಂದ ಸ್ಥಾಪಿಸಲಾದ ಎಂ.ಎಸ್.ಪಿ.ಸಿಗಳಿಂದಲೇ ಅಂಗನವಾಡಿ ಕೇಂದ್ರಗಳಿಗೆ ಆಹಾರ ಸಾಮಗ್ರಿಗಳನ್ನು ಪೂರೈಸಲಾಗುತ್ತಿದೆ.<br><br>ಘನ ಉಚ್ಚ ನ್ಯಾಯಾಲಯದ ಆದೇಶದ ಅನುಷ್ಠಾನಕ್ಕಾಗಿ ಬ್ಯೂರೋ ಆಫ್ ಇಂಡಿಯನ್ ಸ್ಟ್ಯಾಂಡರ್ಡ್ಸ್ (BIS) ಪರವಾನಗಿ ಹೊಂದಿರುವ ಅರ್ಹ ಮಹಿಳಾ ಗುಂಪುಗಳೊಂದಿಗೆ ಪೂರಕ ಪೌಷ್ಟಿಕ ಆಹಾರದ ಗುಣಮಟ್ಟವನ್ನು ಹೆಚ್ಚಿಸುವ ಸಲುವಾಗಿ ಸರ್ಕಾರಕ್ಕೆ ಯಾವುದೇ ಹೆಚ್ಚಿನ ಆರ್ಥಿಕ ಹೊರೆಯಿಲ್ಲದೆ ತಾಂತ್ರಿಕ ನೆರವು ಪಡೆಯಲು ಎಂ.ಎಸ್.ಪಿ.ಸಿಗಳು ತಮ್ಮ ಹಂತದಲ್ಲಿ ಕರಾರು ಒಪ್ಪಂದವನ್ನು ಮಾಡಿಕೊಂಡಿರುತ್ತವೆ.<br><br>ಅಂಗನವಾಡಿ ಕೇಂದ್ರಗಳಿಗೆ ಪೂರಕ ಪೌಷ್ಟಿಕ ಆಹಾರ ವಿತರಿಸುವ ಮುನ್ನ ಆಹಾರ ಸಾಮಗ್ರಿಗಳನ್ನು ಎನ್.ಎ.ಬಿ.ಎಲ್. ನೋಂದಾಯಿತ ಪ್ರಯೋಗಾಲಯಗಳಲ್ಲಿ ರಾಸಾಯನಿಕ ವಿಶ್ಲೇಷಣೆಗೆ ಒಳಪಡಿಸಿ, ಸೇವಿಸಲು ಯೋಗ್ಯ ಎಂಬ ವರದಿ ಬಂದ ನಂತರವೇ ಅವುಗಳನ್ನು ಅಂಗನವಾಡಿ ಕೇಂದ್ರಗಳಿಗೆ ಸರಬರಾಜು ಮಾಡುತ್ತಿದ್ದು, ಕಳಪೆ ಗುಣಮಟ್ಟದ ಆಹಾರ ಸಾಮಗ್ರಿಗಳು ಪೂರೈಕೆ ಆಗಿರುವುದಿಲ್ಲ.<br><br>ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ FSSAI ಪ್ರಯೋಗಾಲಯಗಳು, 2024-25ನೇ ಸಾಲಿನಲ್ಲಿ 1,329 ಮಾದರಿಗಳನ್ನು ಮತ್ತು 2025-26ನೇ ಸಾಲಿನಲ್ಲಿ ಈವರೆವಿಗೆ 674 ಪೂರಕ ಪೌಷ್ಟಿಕ ಆಹಾರದ ಮಾದರಿಗಳನ್ನು ಅಂಗನವಾಡಿ ಕೇಂದ್ರಗಳಿಂದ ಸಂಗ್ರಹಿಸಿ ಪರೀಕ್ಷೆ ನಡೆಸಲಾಗಿದೆ. ಆದರೆ, ಈವರೆಗೆ ಯಾವುದೇ ಪ್ರತಿಕೂಲ ವರದಿ ಸ್ವೀಕೃತವಾಗಿರುವುದಿಲ್ಲ. |
| ಉ) | ಕಳಪೆ ಆಹಾರ ಸಾಮಾಗ್ರಿ ಪೂರೈಕೆ ಆರೋಪದ ಮೇರೆಗೆ ಮೆ;ಕ್ರಿಸ್ಟಿ ಫ್ರೈಡ್‌ಗ್ರಾಂ ಎಂಬ ಸಂಸ್ಥೆಯನ್ನು ಕಪ್ಪು ಪಟ್ಟಿಗೆ ಸೇರ್ಪಡೆ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಕಪ್ಪು ಪಟ್ಟಿಗೆ ಸೇರ್ಪಡೆ ಮಾಡಿದ್ದು ಯಾವಾಗ? | ಕಳಪೆ ಆಹಾರ ಸಾಮಗ್ರಿ ಪೂರೈಕೆ ಆರೋಪದ ಮೇರೆಗೆ ಮೆ:ಕ್ರಿಸ್ಟಿ ಫ್ರೈಡ್‌ಗ್ರಾಂ ಎಂಬ ಸಂಸ್ಥೆಯನ್ನು ಕಪ್ಪು ಪಟ್ಟಿಗೆ ಸೇರಿಸಿರುವ ಕುರಿತು ಯಾವುದೇ ದಾಖಲೆಗಳು ಲಭ್ಯವಿರುವುದಿಲ್ಲ. |

**ಸಂಖ್ಯೆ: ಮಮಇ 235 ಐಸಿಡಿ 2025**

**(ಲಕ್ಷ್ಮೀ ಆರ್. ಹೆಬ್ಬಾಳಕರ್)**
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ
ವಿಕಲಚೇತನರ ಮತ್ತು ಹಿರಿಯ ನಾಗರಿಕರ
ಸಬಲೀಕರಣ ಸಚಿವರು